# ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
# KARNATAKA LEGISLATIVE ASSEMBLY, RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

5

ಶಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಮಂಡಲ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE : 28/8/2020



ಅಧಿವೇಶನ ನಡೆಸುವ ಸಾಧ್ಯಾಸಾಧ್ಯತೆ ಕುರಿತಂತೆ ವಿಧಾನ ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿಯವರು ವಿಧಾನಸಭೆ ಸಭಾಂಗಣವನ್ನು ಪರಿಶೀಲಿಸಿದರು. ಈ ಸಂದರ್ಭದಲ್ಲಿ ಕಾನೂನು ಸಚಿವ ಮಾಧುಸ್ವಾಮಿ, ಸರ್ಕಾರದ ಮುಖ್ಯ ಕಾರ್ಯದರ್ಶಿ ವಿಜಯಭಾಸ್ಕರ್ ಮತ್ತಿತರರಿದ್ದರು.

# ಮಳೆಗಾಲದ ಅಧಿವೇಶನ

ಸಂ.ಕ.ಸಮಾಚಾರ, ಬೆಂಗಳೂರು 27/8/20

ಕೊರೊನಾ ವೈರಸ್ ಹಾವಳಿ ಹಿನ್ನೆಲೆಯಲ್ಲಿ ವಿಧಾನ ಮಂಡಳದ ಅಧಿವೇಶನ ಎಲ್ಲಿ ನಡೆಸಬೇಕು ಎಂಬ ಗೊಂದಲಕ್ಕೆ ಕೊನೆಗೂ ತೆರೆಬಿದ್ದಿದೆ. ವಿಧಾನಸೌಧದಲ್ಲೇ ಮಳೆಗಾಲದ ಅಧಿವೇಶನ ಮಾಡಲು ತೀರ್ಮಾನ ಮಾಡಲಾಗಿದೆ ಎಂದು ಕಾನೂನು ಸಚಿವ ಮಾಧುಸ್ವಾಮಿ ಸ್ಪಷ್ಟಪಡಿಸಿದ್ದಾರೆ.

- ಸದಸ್ಯರ ಆಸನದ ಮಧ್ಯೆ ಗಾಜಿನ ಪರದೆ
- 70 ವರ್ಷ ಮೇಲ್ಪಟ್ಟ ಸದಸ್ಯರಿಗೆ ವಿನಾಯಿತಿ

ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ, ಮುಖ್ಯ ಕಾರ್ಯದರ್ಶಿ ಟಿ.ಎಂ.ವಿಜಯಭಾಸ್ಕರ್ ಹಾಗೂ ವಿಧಾನಸಭೆ ಕಾರ್ಯದರ್ಶಿ ಕೆ.ಎಂ. ವಿಶಾಲಾಕ್ಷಿ ಅವರು ಜತೆಗೂಡಿ ಸದನವನ್ನು ವೀಕ್ಷಣೆ ಮಾಡಿ ಮಾತನಾಡಿದ ಅವರು, ವಿಧಾನಸೌಧದಲ್ಲೇ ಸದನ ಕಲಾಪ ನಡೆಸಲು ಸ್ಪೀಕರ್ ತೀರ್ಮಾನ ಮಾಡಿದ್ದಾರೆ ಎಂದರು. ಸ್ಪೀಕರ್ ಕಾಗೇರಿ ಅವರ ತೀರ್ಮಾನಕ್ಕೆ ನಾವು ಸಮ್ಮತಿ ನೀಡಿದ್ದೇವೆ ಎಂದು ವಿವರಿಸಿದರು.

ವಿಧಾನಸಭೆ ಕಲಾಪ ನಡೆಯುವ ಸಭಾಂಗಣದಲ್ಲಿ ಸದಸ್ಯರು ಕುಳಿತುಕೊಳ್ಳುವ ಎರಡು ಆಸನಗಳ ಮಧ್ಯೆ ಗಾಜಿನ ಪರದೆ ಹಾಕಲಾಗುತ್ತದೆ. ಈ ಬಾರಿ ಅಧಿವೇಶನಕ್ಕೆ ಸಾರ್ವಜನಿಕರಿಗೆ ನಿರ್ಬಂಧ ವಿಧಿಸಲಾಗಿದೆ. ಮಳೆಗಾಲದ ಅಧಿವೇಶನ ಪ್ರವೇಶಕ್ಕೆ ಸಾರ್ವಜನಿಕರಿಗೆ ಅವಕಾಶ ಇರುವುದಿಲ್ಲ. ಪತ್ರಕರ್ತರಿಗೂ ಎರಡು ಪ್ರತ್ಯೇಕ ಗ್ಯಾಲರಿ ಮಾಡಲು ತೀರ್ಮಾನ ಮಾಡಲಾಗಿದೆ ಎಂದು ಕಾನೂನು ಸಚಿವರು ತಿಳಿಸಿದ್ದಾರೆ.

ಅಧಿವೇಶನದಲ್ಲಿ ಭಾಗಿಯಾಗುವ ಎಲ್ಲ ಸದಸ್ಯರು ಮತ್ತು ಅಧಿಕಾರಿಗಳಿಗೆ ಫೇಸ್ ಶೀಲ್ಡ್, ಮಾಸ್ಕ್ ಕೊಡಲಾಗುವುದು. ಉನ್ನತ ಅಧಿಕಾರಿಗಳಿಗೆ, ಇಲಾಖೆಗಳ ಪ್ರಧಾನ ಕಾರ್ಯದರ್ಶಿ ಮಟ್ಟದ ಅಧಿಕಾರಿಗಳಿಗೆ ಮಾತ್ರ ಸದನಕ್ಕೆ ಪ್ರವೇಶ ಕಲ್ಪಿಸಲಾಗುವುದು. ಒಂದು ಇಲಾಖೆಗೆ ಒಬ್ಬ ಅಧಿಕಾರಿ ಮಾತ್ರ ಹಾಜರಾಗಬೇಕು. ಸಚಿವರ ಜೊತೆ ಅವರ ಆಪ್ತ ಕಾರ್ಯದರ್ಶಿಗೆ ಮಾತ್ರ ಅವಕಾಶ.

ಅಂಗರಕ್ಷಕರಿಗೂ ಪ್ರವೇಶಾವಕಾಶ ನಿರಾಕರಿಸಲಾಗುತ್ತಿದೆ. ಇದೇ ಮೊದಲ ಬಾರಿಗೆ 70 ವರ್ಷ ಮೇಲ್ಪಟ್ಟ ವಿಧಾನಸಭೆ ಮತ್ತು ಪರಿಷತ್ ಸದಸ್ಯರಿಗೆ ವಿನಾಯಿತಿ ಕೊಡುವ ಬಗ್ಗೆ ತೀರ್ಮಾನ ಮಾಡುತ್ತೇವೆ ಎಂದು ಕಾನೂನು ಸಚಿವ ಮಾಧುಸ್ವಾಮಿ ಹೇಳಿದ್ದಾರೆ. ಈ ಮೊದಲು ಅಧಿವೇಶನವನ್ನು ವಿಧಾನಸೌಧದಿಂದ ಬೇರೆ ಕಡೆಗೆ ಸ್ಥಳಾಂತರಿಸಿ ಯಾವುದಾದರೂ ಬೃಹತ್ ಸಭಾಂಗಣದಲ್ಲಿ ಆಯೋಜಿಸುವ ಚಿಂತನೆ ನಡೆದಿತ್ತು.